ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ**

ಸ್ವಚ್ಛ ಭಾರತ
ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

## ಕೆಲವೇ ಗಂಟೆಗಳಲ್ಲಿ ಮಲತ್ಯಾಜ್ಯ ಸಂಸ್ಕರಣೆ ಮಾಡುತ್ತದೆ ಕೊಡಗಿನ

# ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ವಾಹನ




ಹಳ್ಳಿಗಳ ಅಭಿವೃದ್ಧಿಯಾದರೆ ದೇಶದ ಅಭಿವೃದ್ಧಿ ಸಾಧ್ಯ. ಹೀಗಾಗಿ ಪ್ರತಿ ಗ್ರಾಮಗಳಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯಕ್ಕೆ ಒತ್ತು ನೀಡುವುದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಪ್ರಮುಖ ಧ್ಯೇಯ. ಅದರಂತೆ ಕರ್ನಾಟಕದ ಗ್ರಾಮೀಣ ಭಾಗಗಳಲ್ಲಿ ತ್ಯಾಜ್ಯ ವಿಲೇವಾರಿ ಹಾಗೂ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಗೆ ವಿಶೇಷ ಒತ್ತು ನೀಡಲಾಗುತ್ತಿದೆ. ಇದಕ್ಕೊಂದು ಹೊಸ ನಿದರ್ಶನ ಹಾಗೂ ಮಾದರಿ ಕೊಡಗು ಜಿಲ್ಲೆಯ 'ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ವಾಹನ'.

ಕರ್ನಾಟಕ ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಕೊಡಗು ಜಿಲ್ಲೆಯಲ್ಲಿ ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ಘಟಕ ಕಾರ್ಯಾರಂಭಗೊಂಡಿದೆ. ಇಂತಹ ಮೊಬೈಲ್ ಸೆಪ್ಟೇಜ್ ಟ್ರೀಟ್‌ಮೆಂಟ್ ಯುನಿಟ್ (ಎಂ.ಟಿ.ಯು) ವಾಹನಗಳು ಮಂಜಿನ ನಗರಿಯಲ್ಲಿ ನೈರ್ಮಲ್ಯ ಚಟುವಟಿಕೆಗಳನ್ನು ಚುರುಕುಗೊಳಿಸುವಲ್ಲಿ ಪುಷ್ಠಿ ನೀಡಿವೆ.

ಕೊಡಗು ಜಿಲ್ಲೆಯಲ್ಲಿ ಈಗಾಗಲೇ ಮಡಿಕೇರಿ ತಾಲೂಕಿನ ಭಾಗಮಂಡಲ ಹಾಗೂ ಕುಶಾಲನಗರ ತಾಲೂಕಿನ ಸುಂಟಿಕೊಪ್ಪದಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ಕಾರ್ಯಾರಂಭಗೊಂಡಿದೆ. ಇದೀಗ ರಾಜ್ಯದಲ್ಲಿಯೇ ಮೊದಲ ಬಾರಿಗೆ ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ವಾಹನಗಳನ್ನು ಪರಿಚಯಿಸಿದ ಕೀರ್ತಿ ಜಿಲ್ಲೆಗೆ ಸಂದಿದೆ.

## ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ಘಟಕದ ಕೆಲಸವೇನು?

ಸಾಮಾನ್ಯವಾಗಿ ಮಲತ್ಯಾಜ್ಯ ಸಂಸ್ಕರಣಾ ಘಟಕದಲ್ಲಿ ಒಂದು ಬಾರಿ ಮಲತ್ಯಾಜ್ಯ ಸಂಸ್ಕರಣೆಕೊಂಡು ಅದರಲ್ಲಿ ಘನ ಮತ್ತು ದ್ರವ ತ್ಯಾಜ್ಯಗಳು ಸಂಪೂರ್ಣವಾಗಿ ಪ್ರತ್ಯೇಕಗೊಂಡು ಸಂಸ್ಕರಣೆಯಾಗಲು ಕನಿಷ್ಠ 3 ತಿಂಗಳ ಸಮಯ ಬೇಕು. ಆದರೆ, ಈ ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ವಾಹನವು ಈ ಕಾರ್ಯವನ್ನು ಕೆಲವೇ ಗಂಟೆಗಳಲ್ಲಿ ಮಾಡಿ ಮುಗಿಸುತ್ತದೆ. ಅಷ್ಟೇ ಅಲ್ಲ, ಇದರಲ್ಲಿ ಪ್ರತ್ಯೇಕಿಸಲಾಗುವ ಮಲತ್ಯಾಜ್ಯದಲ್ಲಿನ ನೀರನ್ನು ಕೂಡಾ ಶೇ.60ರಿಂದ 70ರಷ್ಟು ಶುದ್ಧೀಕರಿಸುತ್ತದೆ. ಈ ನೀರು ಕುಡಿಯುವಷ್ಟು ಸುರಕ್ಷಿತವಲ್ಲ. ಆದರೆ ಗಿಡಗಳಿಗೆ ಬಳಸಬಹುದು. ಇಲ್ಲದಿದ್ದರೆ ನೇರವಾಗಿ ಚರಂಡಿಗೆ ಹರಿಸಿಬಿಡಬಹುದು.

## ಕ್ಷಿಪ್ರ ಕೆಲಸ ಮಾಡುವ ಸಂಚಾರಿ ವಾಹನದ ವೈಶಿಷ್ಟ್ಯಗಳಿವು

ಈ ವಾಹನವೊಂದಿದ್ದರೆ ಸಾಕು; ಮಲತ್ಯಾಜ್ಯವನ್ನು ಸಂಸ್ಕರಣೆ, ನಿರ್ವಹಣೆ ಮತ್ತು ವಿಲೇವಾರಿಗೆಂದು ಸಂಸ್ಕರಣಾ ಘಟಕಕ್ಕೆ ತರುವ ಅಗತ್ಯವೇ ಇಲ್ಲ. ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ವಾಹನವೇ ಈ ಪ್ರಕ್ರಿಯೆ ಮುಗಿಸುತ್ತದೆ. ಈ ಕೆಲಸಕ್ಕೆ ಬೇಕಾದ ಅಗತ್ಯ ಪರಿಕರಗಳ ವ್ಯವಸ್ಥೆಯೂ ವಾಹನದಲ್ಲಿ ಇದ್ದು, ಯಾವುದೇ ಸ್ಥಳಕ್ಕೂ ತೆರಳಿ ಸಂಸ್ಕರಣಾ ಕಾರ್ಯ ನಿರ್ವಹಿಸಲು ಸಾಧ್ಯವಾಗುತ್ತದೆ. ಸಂಸ್ಕರಣೆ ಕೆಲಸದ ನಂತರ ಉಳಿಯುವ ಮಲಹೂಳು ಅಥವಾ ಮಲತ್ಯಾಜ್ಯವನ್ನು ಕೂಡಾ ಈ ವಾಹನವೇ ಶೇ.80ರಷ್ಟು ಸಂಸ್ಕರಣೆ ಮಾಡುತ್ತದೆ. ಆ ಬಳಿಕ ಅದನ್ನು ಮಲತ್ಯಾಜ್ಯ ಸಂಸ್ಕರಣಾ ಘಟಕಕ್ಕೆ ರವಾನಿಸಿ, ಗೊಬ್ಬರ ತಯಾರಿಕೆಗೆ ಬಳಸಬಹುದಾಗಿದೆ.

**90** ಲಕ್ಷ ರೂ. ವೆಚ್ಚ




ಜಿಲ್ಲೆಯಲ್ಲಿ ಕಾರ್ಯಾರಂಭಿಸಿರುವ 3 ವಾಹನಗಳಿಗೆ ಪ್ರತಿ ವಾಹನಕ್ಕೆ ತಲಾ **ರೂ. 30** ಲಕ್ಷದಂತೆ ಒಟ್ಟು **ರೂ.90** ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. ಜಿಲ್ಲೆಯ ಕುಟ್ಟ, ನಾಪೋಕ್ಲು ಮತ್ತು ಶನಿವಾರ ಸಂತೆ ಗ್ರಾ. ಪಂ. ವ್ಯಾಪ್ತಿಗಳಲ್ಲಿ ಈ ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ವಾಹನ ಕಾರ್ಯಪ್ರವೃತವಾಗಲಿದ್ದು, ಮುಂದಿನ ದಿನಗಳಲ್ಲಿ ತಾಲೂಕು ವ್ಯಾಪ್ತಿಯಲ್ಲಿಯೂ ಸೇವೆಗೆ ಲಭ್ಯವಾಗಲಿದೆ.

ರಾಜ್ಯದಲ್ಲಿಯೇ ಮೊದಲ ಬಾರಿಗೆ ಕೊಡಗು ಜಿಲ್ಲೆಯಲ್ಲಿ ಈ ಸಂಚಾರಿ ಮಲತ್ಯಾಜ್ಯ ಸಂಸ್ಕರಣಾ ವಾಹನಗಳು ಕಾರ್ಯನಿರ್ವಹಿಸಲಿದ್ದು, ಆ ಮೂಲಕ ರಾಜ್ಯದ ಇತರ ಜಿಲ್ಲೆಗಳಿಗೂ ಸ್ಫೂರ್ತಿಯಾಗಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ಮತ್ತಷ್ಟು ಜಿಲ್ಲೆಗಳಲ್ಲಿ ಇಂತಹ ವಾಹನದ ಸೌಲಭ್ಯ ದೊರೆಯಲಿದೆ.